**O.S.306/2025**
**PW:1**

**ದಿಃ17.06.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಪರ ವಕೀಲರಿಂದಃ**

ನಾನು ನನ್ನ ಸಾಕ್ಷಿಯ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದಲ್ಲಿ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆಸಿರುವ ವಿಷಯಗಳು ಸರಿ ಮತ್ತು ನಿಜ ಇರುತ್ತವೆ. ನಾನು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

| | |
|---|---|
| ನಿ.ಪಿ.01 | ಸಿಟಿ ಸರ್ವೇ ನಕ್ಷೆಯ ದೃಡಿಕೃತ ನಕಲು |
| ನಿ.ಪಿ.02 | Property register card ನ ದೃಡಿಕೃತ ನಕಲು |
| | ಎಂದು ಗುರುತಿಸಲಾಯಿತು |

ಈ ಕಾರಣಗಳಿಂದಾಗಿ ವಾದಿಯ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**<u>ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ</u>**

ದಾವೆ ಸಲ್ಲಿಸಲು ಮತ್ತು ನನ್ನ ಸಾಕ್ಷ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ದಾವಾ ಆಸ್ತಿಯ ಚೆಕ್ಕುಬಂದಿ ತಪ್ಪಾಗಿರುತ್ತದೆ ಎಂದರೆ ಸರಿಯಲ್ಲ.

ದಾವಾ ಆಸ್ತಿ ನನ್ನ ತಂದೆಯ ಸ್ವಯಾರ್ಜಿತ ಆಸ್ತಿ ಅಂದರೆ ಸರಿಯಲ್ಲ. ನನಗೆ ಬರಬೇಕಾದಂತಹ ಭಾಗವನ್ನು ನನ್ನ ತಂದೆ ನನ್ನ ಮದುವೆ ಕಾಲಕ್ಕೆ ಹಣಮತ್ತು ಒಡವೆ ರೂಪದಲ್ಲಿ ಕೊಟ್ಟಿರುತ್ತಾರೆಂದರೆ ಸರಿಯಲ್ಲ. 2025 ರಲ್ಲಿ ನಾನು ನನ್ನ

ತಂದೆಯ ಬಳಿ ಭಾಗ ಕೊಡುವಂತೆ ಕೇಳಿದೆ ಎಂದು ಸುಳ್ಳು ಹೇಳುತ್ತಿದ್ದೆನೆಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯನ್ನು ಮಾರಾಟ ಮಾಡಲುಪ್ರಯತ್ನಿಸುತ್ತಿದ್ದಾರೆಂದು ಸುಳ್ಳು ಹೇಳುತ್ತಿದ್ದೆನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ನನ್ನ ತಂದೆಯ ಸ್ವಯಾರ್ಜಿತ ಆಸ್ತಿ ಆಗಿದ್ದರೂ ಪ್ರತಿವಾದಿಗಳು ವಿರುದ್ದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೆನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ - ಇರುವುದಿಲ್ಲ.</u>**

(ತೆರೆದ ನ್ಯಾಯಲಯದಲ್ಲಿ ಬೆರಳಚ್ಚುಗಾರರು ನನ್ನ ಉಕ್ತಲೇಖನದ ಮೇರೆಗೆ ಸಾಕ್ಷಿಯ ಸಾಕ್ಷ್ಯವನ್ನು ಬೆರಳಚ್ಚು ಮಾಡಿಸಲಾಯಿತು.)

**ಓ. ಹೇ. ಕೇ. ಸ. ಇದೆ.**

**3 ನೇ ಹೆ ಹಿ ದಿ ನ್ಯಾ ಹಾಗೂ ಸಿಜೆಎಂ, ಧಾರವಾಡ.**